# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಚೌಡೇಶ್ವರಿ ವಾರ್ಡ್ ನಂ-02ರಲ್ಲಿ

## ದಿನಾಂಕ: 16-10-2021 ರಂದು ನಡೆದ ಸಮಿತಿ ಸಭಾ ನಡವಳಿ.

**ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.**

1. ಶ್ರೀ.ಕೆ.ಎ.ಶಾಂತರಾಜ್ ನೋಡಲ್ ಅಧಿಕಾರಿಗಳು.
2. ಶ್ರೀ.ಚಂದ್ರಕಾಂತ್‌ರಾಜ್ ಪಿ.ಎ ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿ.
3. ಶ್ರೀ. ಶಶಿಕುಮಾರ್ ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ.
4. ಶ್ರೀ.ಚಂದ್ರಪ್ಪ ಅರಣ್ಯ ಇಲಾಖೆ, ಬಿ.ಬಿ.ಎಂ.ಪಿ ಯಲಹಂಕ ವಲಯ.
5. ಶ್ರೀ.ಬಾಬು ರೆಡ್ಡಿ ಸಹಾಯಕ ಅಭಿಯಂತರರು ವಿದ್ಯುತ್.

ವಾರ್ಡ್ ಸಮಿತಿಯ ಪ್ರಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

1. ವಾರ್ಡ್ ನಂ -02ರ ವ್ಯಾಪ್ತಿಯಲ್ಲಿರುವ ಕಾಮಾಕ್ಷಮ್ಮ ಬಡಾವಣೆಯಲ್ಲಿನ ವರದರಾಜು ಮನೆ ರಸ್ತೆಯ ಹತ್ತಿರ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಕುಡಿಯುವ ನೀರಿನ ಪೂರೈಕೆ ಸಮರ್ಪಕವಾಗಿ ಮಾಡುತ್ತಿರುವುದಿಲ್ಲ ವೆಂದು ಸಭೆಗೆ ಸಾರ್ವಜನಿಕರು ದೂರನ್ನು ಸಲ್ಲಿಸಿದರು.

2. ವಾರ್ಡ್‌ಗಳ ವ್ಯಾಪ್ತಿಯಲ್ಲಿ ಕೊವಿಡ್ -19 ರ ಮುಂಜಾಗ್ರತ ಕ್ರಮಗಳನ್ನು ಕೈಗೊಳ್ಳಲು ಹಾಗೂ ವ್ಯಾಕ್ಸಿನ್ ಹಾಕಿಸಿಕೊಳ್ಳುವುದರ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

3. ವಾರ್ಡ್‌ನ ವ್ಯಾಪ್ತಿಯಲ್ಲಿರುವ ಯಲಹಂಕ ಒಲ್ಡ್ ಟೌನ್‌ನ ಕೋಟೆ ಬೀದಿಯಲ್ಲಿ ದೀಪ ಉರಿಯುತ್ತಿರುವುದಿಲ್ಲ ಎಂದು ಸಾರ್ವಜನಿಕರು ದೂರು ನೀಡಿದ್ದು, ಸದರಿ ದೂರಿನನ್ವಯ ಸ್ಥಳ ಪರಿಶೀಲನೆ ಮಾಡಿ ಬೀದಿ ದೀಪ ರಿಪೇರಿ ಮಾಡಿಸಿಕೊಡಲು ನೋಡೆಲ್ ಅಧಿಕಾರಿಗಳು ಸೂಚಿಸಿದರು.

4. ವಾರ್ಡ್‌ಗಳ ವ್ಯಾಪ್ತಿಯಲ್ಲಿ ಘನತ್ಯಾಜ್ಯ ವಸ್ತುಗಳನ್ನು ಸಮರ್ಪಕವಾಗಿ ಸಂಗ್ರಹಣೆ ಹಾಗೂ ನಿರ್ವಹಣೆ ಮಾಡುವಂತೆ ಸಂಬಂಧಿಸಿದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ನೋಡೆಲ್ ಅಧಿಕಾರಿಗಳು ಸಭೆಯಲ್ಲಿ ಸೂಚಿಸಿದರು.

5. ಕೊಂಡಪ್ಪ ಬಡಾವಣೆಯಲ್ಲಿ ಇತ್ತೀಚೆಗೆ ಬಿದ್ದ ಭಾರಿ ಮಳೆಯಿಂಧಾಗಿ ತಗ್ಗು ಪ್ರದೇಶಗಳಲ್ಲಿ ನೀರು ನುಗ್ಗುತ್ತಿದ್ದು, ಹೊಸದಾಗಿ ಚರಂಡಿ ನಿರ್ಮಾಣ ಮಾಡಿಕೊಡುವಂತೆ ಕೋರಿರುತ್ತಾರೆ.

ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಸೂಚಿಸಿದರು. ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾದನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

18/10/2021

ಕಾರ್ಯದರ್ಶಿಗಳು/ ಸಹಾಯಕ ಅಭಿಯಂತರರು
ವಾರ್ಡ್ ಕಮಿಟಿ, ವಾರ್ಡ್ ನಂ. 02(ಚೌಡೇಶ್ವರಿ)

18/10/2021

ವಾರ್ಡ್‌ನ ನೋಡಲ್ ಅಧಿಕಾರಿಗಳು
ವಾರ್ಡ್ ಕಮಿಟಿ, ವಾರ್ಡ್ ನಂ. 02(ಚೌಡೇಶ್ವರಿ)

**ಪ್ರತಿಯನ್ನು:**

ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರುಗಳ ಮಾಹಿತಿಗಾಗಿ.

## ಅಧಿಕಾರಿಗಳ ಮಾಹಿತಿಗಾಗಿ.

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಮಾಹಿತಿಗಾಗಿ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಮಾಹಿತಿಗಾಗಿ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ವಿಭಾಗ ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ಯಲಹಂಕರವರ ಸೂಕ್ತ ಕ್ರಮಕ್ಕಾಗಿ.